## 13. 12 ಸಾವಿರ ಮೂಲೆ ನಿವೇಶನ ಹರಾಜು

ಕೋವಿಡ್–19 ಲಾಕ್‌ಡೌನ್‌ನಿಂದಾಗಿ ರಾಜ್ಯದಲ್ಲಿ ಆರ್ಥಿಕ ಸಂಕಷ್ಟ ಬಿಗಡಾಯಿಸಿದ್ದು, ಸಂಪನ್ಮೂಲ ಸಂಗ್ರಹಕ್ಕಾಗಿ ಬಿಡಿಎ ಬಡಾವಣೆಗಳಲ್ಲಿರುವ 12 ಸಾವಿರ ಮೂಲೆ ನಿವೇಶನಗಳನ್ನು ಹರಾಜು ಹಾಕಲು ಸರ್ಕಾರ ಮುಂದಾಗಿದೆ.

ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ನಡೆದ ಸಚಿವರು ಮತ್ತು ಹಿರಿಯ ಅಧಿಕಾರಿಗಳ ಸಭೆಯಲ್ಲಿ ಸಂಪನ್ಮೂಲ ಸಂಗ್ರಹಕ್ಕೆ ಇನ್ನೂ ಹಲವು ಕ್ರಮಗಳನ್ನು ತೆಗೆದುಕೊಳ್ಳಲು ನಿರ್ಧರಿಸಲಾಯಿತು. ಬಿಡಿಎ ಮೂಲೆ ನಿವೇಶನಗಳನ್ನು ಮಾರಾಟ ಮಾಡುವುದರಿಂದ ಸುಮಾರು ರೂ.15 ಸಾವಿರ ಕೋಟಿ ಆದಾಯ ಒದಗುವ ಸಾಧ್ಯತೆ ಇದೆ. ರಾಜ್ಯದ ಇತರ ನಗರಗಳಲ್ಲಿರುವ ನಗರಾಭಿವೃದ್ಧಿ ಪ್ರಾಧಿಕಾರಗಳ ಮೂಲೆ ನಿವೇಶನಗಳು ಮತ್ತು ಖಾಲಿ ನಿವೇಶನಗಳನ್ನೂ ಹರಾಜು ಹಾಕಲು ತೀರ್ಮಾನಿಸಲಾಗಿದೆ ಎಂದರು.

ಅನಧಿಕೃತ ಕಟ್ಟಡಗಳಿಗೆ ಸಂಬಂಧಿಸಿದಂತೆ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳ ತ್ವರಿತ ವಿಲೇವಾರಿಗೆ ಪ್ರಯತ್ನಿಸಲಾಗುವುದು. ಇಂತಹ ಪ್ರಕರಣಗಳು ಇತ್ಯರ್ಥವಾದರೆ, ನಾಗರಿಕರಿಗೂ ಅನುಕೂಲವಾಗುತ್ತದೆ ಮತ್ತು ಬೊಕ್ಕಸಕ್ಕೂ ಹೆಚ್ಚಿನ ಆದಾಯ ಸಿಗುತ್ತದೆ. ಖಾಸಗಿ ಮತ್ತು ಸಹಕಾರಿ ಬಡಾವಣೆ ನಿರ್ಮಾಣ ಹಾಗೂ ನಿವೇಶನಕ್ಕೆ ಸಂಬಂಧಿಸಿದಂತೆ ಕಾನೂನು ತಿದ್ದುಪಡಿ ಮಾಡಲು ಉದ್ದೇಶಿಸಲಾಗಿದೆ. ಇದರಿಂದ ಅನುಮತಿಗೆ ಕಾಯುತ್ತಿರುವ ನೂರಾರು ವಸತಿ ನಿರ್ಮಾಣ ಸೊಸೈಟಿಗಳಿಗೆ ಅನುಮತಿ ನೀಡಲು ಸಾಧ್ಯವಾಗುತ್ತದೆ.. ರಾಜ್ಯದಲ್ಲಿ ಆರ್ಥಿಕ ಪರಿಸ್ಥಿತಿಯನ್ನು ಸುಸ್ಥಿತಿಗೆ ತರಲು ಎಲ್ಲ ರೀತಿಯ ಪ್ರಯತ್ನಗಳನ್ನು ನಡೆಸಲಾಗಿದೆ. ಇದಕ್ಕಾಗಿ ಅಧಿಕಾರಿಗಳ ಜೊತೆ ಚರ್ಚೆ ನಡೆಸಲಾಗಿದೆ. ಇಂದಿನ ಸಭೆಯಲ್ಲಿ ಹಲವು ಸಲಹೆ ಸೂಚನೆಗಳು ಬಂದವು ಅವುಗಳನ್ನು ಜಾರಿಗೊಳಿಸಲಾಗುತ್ತದೆ.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಲಭ್ಯವಿರುವ ರೂ.21 ಸಾವಿರ ಕೋಟಿಗಳನ್ನು ವೈದ್ಯಕೀಯ ಕಾಲೇಜುಗಳ ಮೂಲಸೌಲಭ್ಯ ಅಭಿವೃದ್ಧಿಗೆ ಬಳಸಲು ಉದ್ದೇಶಿಸಲಾಗಿದೆ. ರಾಜ್ಯದಲ್ಲಿ ಉಚಿತ ಹಾಲು ವಿತರಣೆ ಇನ್ನೂ ಒಂದು ವಾರ ವಿಸ್ತರಣೆ ಮಾಡಲಾಗುವುದು. ಸಕ್ಕರೆ ಕಾರ್ಖಾನೆಗಳು ಕಬ್ಬು ಬೆಳೆಗಾರರಿಗೆ ಪಾವತಿಸಬೇಕಾಗಿರುವ ರೂ.2,834 ಕೋಟಿಯನ್ನು ಕೂಡಲೇ ಪಾವತಿಸಲು ಸೂಚಿಸಲಾಗಿದೆ. ಒಂದು ವೇಳೆ ಕಾರ್ಖಾನೆಗಳ ಮಾಲೀಕರು ಸರ್ಕಾರದ ಆದೇಶವನ್ನು ಪಾಲಿಸದೇ ಇದ್ದರೆ ಕಠಿಣ ಕ್ರಮ ತೆಗೆದುಕೊಳ್ಳಲಾಗುವುದು. ಉತ್ತರ ಕರ್ನಾಟಕದ ಭಾಗದ ರಾಯಚೂರು, ಕೊಪ್ಪಳ ಜಿಲ್ಲೆಗಳಲ್ಲಿ ಆಲಿಕಲ್ಲು ಮಳೆಯಿಂದ ಭತ್ತದ ಬೆಳೆ ನಾಶವಾಗಿರುವುದರಿಂದ ರೈತರಿಗೆ ಪರಿಹಾರ ನೀಡಲು ರೂ.45 ಕೋಟಿ ಬಿಡುಗಡೆ ಮಾಡಲಾಗಿದೆ ಎಂದು ಮುಖ್ಯಮಂತ್ರಿಯವರು ತಿಳಿಸಿದರು.

ಆಧಾರ:ಪ್ರಜಾವಾಣಿ, ದಿನಾಂಕ: 14.04.2020